ಜೆಎಸ್‌ಎಸ್ ಮಹಾವಿದ್ಯಾಪೀಠ

ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನವಾರಿಧಿ–51

## ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ

22 ನವೆಂಬರ್ 2021 * ಸೋಮವಾರ * ಸಂಜೆ 6.00

### ದಿವ್ಯ ಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ

ಸುತ್ತೂರು ಶ್ರೀಕ್ಷೇತ್ರ

### ಉಪನ್ಯಾಸ



**ಪ್ರೊ. ಪ್ರೇಮಶೇಖರ**

ಖ್ಯಾತ ಅಂಕಣಕಾರರು, ವಿಜಯವಾಣಿ

ನವದೆಹಲಿ

ವಿಷಯ : ಮನಸ್ಸು ಒಂದು ಮಹಾಶಕ್ತಿ

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

LIVE STREAMING

ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ

YouTube http://Youtube.com/c/JSSMahavidyapeethaonline

https://www.facebook.com/JSSMVP

**ಜ್ಞಾನವಾರಿಧಿ** ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಧರ್ಮ, ಅಧ್ಯಾತ್ಮ, ಯೋಗ, ಕಲೆ, ಸಾಹಿತ್ಯ, ಸಂಸ್ಕೃತಿ, ಆರೋಗ್ಯ, ಜೀವನಶೈಲಿ, ವಿಜ್ಞಾನ, ತಂತ್ರಜ್ಞಾನ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶ ಮತ್ತು ವಿದೇಶದ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಪ್ರೊ. ಪ್ರೇಮಶೇಖರವರು** ಖ್ಯಾತ ಲೇಖಕರು ಮತ್ತು ಅಂಕಣಕಾರರು. ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ಅವರ ಜನ್ಮಸ್ಥಳ. ಕೊಳ್ಳೇಗಾಲದಲ್ಲಿ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣ ಹಾಗೂ ಮೈಸೂರು ವಿಶ್ವವಿದ್ಯಾನಿಲಯದಿಂದ ಬಿಎ, ದೆಹಲಿ ವಿಶ್ವವಿದ್ಯಾಲಯದಿಂದ ಇತಿಹಾಸ ವಿಷಯದಲ್ಲಿ ಎಂಎ ಹಾಗೂ ಜವಾಹರ್‌ಲಾಲ್ ನೆಹರೂ ವಿಶ್ವವಿದ್ಯಾಲಯಗಳಿಂದ ಎಂಫಿಲ್ ಪದವಿ ಪಡೆದರು.

ಪಾಂಡಿಚೇರಿ ವಿಶ್ವವಿದ್ಯಾಲಯದಲ್ಲಿ ಇಪ್ಪತ್ತೆರಡು ವರ್ಷಗಳ ಕಾಲ ಭಾರತದ ವಿದೇಶಾಂಗ ನೀತಿಯನ್ನು ಬೋಧಿಸಿ, 2012ರಲ್ಲಿ ಸ್ವಯಂನಿವೃತ್ತಿ ಪಡೆದರು. ಅಂತಾರಾಷ್ಟ್ರೀಯ ಸಂಬಂಧಗಳು ಹಾಗೂ ವಿದೇಶಾಂಗ ನೀತಿಗಳ ಬಗ್ಗೆ ಸಾಕಷ್ಟು ಅಧ್ಯಯನ ಮಾಡಿದ್ದಾರೆ. ಪಠ್ಯ ವಿಷಯಗಳ ಬಗ್ಗೆ ಇಂಗ್ಲಿಷ್‌ನಲ್ಲಿ ಹಲವಾರು ಸಂಶೋಧನಾ ಲೇಖನಗಳನ್ನು ಪ್ರಕಟಿಸಿದ್ದಾರೆ. ನಾಡಿನ ಪ್ರಮುಖ ದಿನಪತ್ರಿಕೆಗಳಲ್ಲಿ ಅಂತಾರಾಷ್ಟ್ರೀಯ ಸಂಬಂಧಗಳ ಬಗ್ಗೆ ಕನ್ನಡದಲ್ಲಿ ಆರುನೂರಕ್ಕೂ ಹೆಚ್ಚು ಲೇಖನಗಳನ್ನು ಬರೆದಿದ್ದಾರೆ. 2012ರಿಂದ ವಿಜಯವಾಣಿ ದಿನಪತ್ರಿಕೆಯಲ್ಲಿ "ಜಗದಗಲ" ಎಂಬ ಶೀರ್ಷಿಕೆಯ ಅಂಕಣದಲ್ಲಿ ಲೇಖನಗಳು ಪ್ರಕಟವಾಗುತ್ತಿವೆ. ನೇರ ನಡೆನುಡಿಗೆ ಹೆಸರಾದವರು. ಸೃಜನಶೀಲ ಅಭಿವ್ಯಕ್ತಿಯಲ್ಲಿ ಬಹುತ್ವವನ್ನು ಸಾಧಿಸಿದವರು. ಕನ್ನಡದಲ್ಲಿ ಅನೇಕ ಕಥೆ, ಕಾದಂಬರಿ, ಲೇಖನ ಸಂಕಲನಗಳು, ಕವನ ಸಂಕಲನಗಳನ್ನು ಪ್ರಕಟಿಸಿದ್ದಾರೆ. ಮೂರನೆಯ ಹೆಣ್ಣು, ಚಂಡಮಾರುತ, ಅನಾವರಣ, ಬೊಳ್ಳೊಣಕಯ್ಯ, ಗತ ಗತಿ, ಮೊದ್ದುಮಣಿ ಮತ್ತು ಪರಾವಾವಲಂಬಿ, ಯಾನ, ಜತೆಗಾತಿ, ಅಲೆಮಾರಿಯ ಕಥೆಗಳು, ಕಾಲಗೀತ, ದೇಶ ಪರದೇಶ, ಕಾಶ್ಮೀರದ ಕಣ್ಣೀರ ಕಣಿವೆ, ಭಾರತದ ಸಾಂಸ್ಕೃತಿಕ ಆಸ್ಮಿತೆ, ಪ್ರಶಾಂತ ಹಿಮಾಲಯದ ಅಶಾಂತ ಗಡಿ ಸೇರಿದಂತೆ 30ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ.

ಮೂಡಬಿದರೆಯ ಡಾ. ಶಿವರಾಮ ಕಾರಂತ ಪ್ರತಿಷ್ಠಾನದಿಂದ 2020ನೇ ಸಾಲಿನ "ಶಿವರಾಮ ಕಾರಂತ ಪ್ರಶಸ್ತಿ", ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ 2020ನೇ ಸಾಲಿನ "ಸಾಹಿತ್ಯ ಶ್ರೀ" ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಜ್ಞಾನವಾರಿಧಿ–52 * 29 ನವೆಂಬರ್ 2021**

**ಡಾ. ಎಸ್.ವಿ. ನರಸಿಂಹನ್**

ಖ್ಯಾತ ವೈದ್ಯರು
ವಿರಾಜಪೇಟೆ, ಕೊಡಗು ಜಿಲ್ಲೆ

ವಿಷಯ : ಜೀವ ವೈವಿಧ್ಯತೆ ಮತ್ತು ಭಾರತೀಯ ಸಂಸ್ಕೃತಿ

**ಜ್ಞಾನವಾರಿಧಿ–53 * 6 ಡಿಸೆಂಬರ್ 2021**

**ಪ್ರೊ. ಸಿದ್ದು ಯಾಪಲಪರವಿ**

ಪ್ರಾಂಶುಪಾಲರು
ಕೆಎಸ್‌ಎಸ್ ಪದವಿಪೂರ್ವ ಕಾಲೇಜು, ಗದಗ

ವಿಷಯ : ಒತ್ತಡ ನಿರ್ವಹಣೆಯ ಜೀವನಶೈಲಿ